ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಮಸಾಸಂಇ : ಉ ನಿ : ಸುಮಪ : 2019–20 : ದಿನಾಂಕ: 18–11–2019

## SPECIAL MEDIA INVITATION

**The Director General of the Indian Council of Forestry Research and Education - which is a premier organization of the Ministry of Environment, Forest and Climatic Change and has the mandate to look after the Forestry, Research, Education and Extension in the country - Dr S C Gairola will be addressing a LUNCHEON PRESS CONFERENCE on November 19 at 11-30 A M at the Institute of Wood Science and Technology at the 18th Cross in Malleswaram.**

**Media Persons, representing Electronic and Print Media, are requested to kindly attend this Press Conference, at which details of the Indian Council of Forestry Research and Education's initiatives about the Integrated Forestry Research in the emerging areas, Climatic Change Challenges, mitigation and adaptation measures in the country, Forest Restoration Issues and opportunities to meet bone challenge and Intended Nationally Determined Contribution target, Forestry intervention for rejuvenation of 13 major rivers in India, E-protection system for high value trees, Tree translocation activities for maintaining green cover, Indian Council of Forestry Research and Education perspectives to combat drought, land degradation and desertification, Emerging areas of wood composites, transparent wood and wood polymer c9omposites will be disclosed.**

**D. P. MURALIDHAR**
**DEPUTY DIRECTOR ( NEWS)**

## ಸಚಿವರ ಪ್ರವಾಸ

ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ)

ವಸತಿ, ತೋಟಗಾರಿಕೆ ಮತ್ತು ರೇಷ್ಮೆ ಸಚಿವ ಹಾಗೂ ಮೈಸೂರು-ಕೊಡುಗು ಉಸ್ತುವಾರಿ ಸಚಿವರೂ ಆದ ಶ್ರೀ ವಿ. ಸೋಮಣ್ಣ ಅವರು ನವೆಂಬರ್ 20 ರಿಂದ 22 ರವರೆಗೆ ಮೈಸೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು, ನವೆಂಬರ್ 22 ರಂದೇ ನಗರಕ್ಕೆ ಹಿಂದಿರುಗಲಿದ್ದಾರೆ.

## ಅರ್ಜಿ ಆಹ್ವಾನ

ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ)

ತುಮಕೂರು ಜಿಲ್ಲಾ ನ್ಯಾಯಾಂಗದ ಘಟಕದಲ್ಲಿ ಖಾಲಿ ಇರುವ 13 ಶೀಘ್ರಲಿಪಿಗಾರ ಹುದ್ದೆಗಳ ನೇಮಕಕ್ಕೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ತುಮಕೂರು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ವೆಬ್‌ಸೈಟ್ **http://districts.ecourts.gov.in/tumakuru** ನಲ್ಲಿ ನೀಡಲಾದ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ದಿನಾಂಕ: 17-11-2019 ರಿಂದ 17-12-2019 ರ ರಾತ್ರಿ 11.59 ರವರೆಗೆ ಸಲ್ಲಿಸಬಹುದು. ಆನ್‌ಲೈನ್ ಹೊರತುಪಡಿಸಿ, ಖುದ್ದಾಗಿ ಅಥವಾ ಅಂಚೆ ಮೂಲಕ ಸ್ವೀಕರಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಮೇಲಿನ ವೆಬ್‌ಸೈಟ್‌ನ್ನು ವೀಕ್ಷಿಸಬಹುದೆಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶಕರ ಕಾರ್ಯಾಲಯ (ಆಡಳಿತ ವಿಭಾಗ) ತುಮಕೂರು ಇವರ ಪ್ರಕಟಣೆ ತಿಳಿಸಿದೆ.

## ಟೈಲರಿಂಗ್ ಪರೀಕ್ಷೆ

ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ)

2019 ರ ಡಿಸೆಂಬರ್ ತಿಂಗಳಲ್ಲಿ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಒಂದು ವರ್ಷದ ಕ್ರಾಫ್ಟ್ ಕೋರ್ಸ್ ಇನ್ ಟೈಲರಿಂಗ್ ಥಿಯರಿ ಪರೀಕ್ಷೆಯು ಡಿಸೆಂಬರ್ 3 ರಂದು ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 2.00 ಗಂಟೆಯವರೆಗೆ ನಡೆಯಲಿದೆ. ದಿನಾಂಕ: 3-12-2019 ರ ನಂತರ ಪ್ರಾಯೋಗಿಕ ಪರೀಕ್ಷೆಗಳು ನಡೆಯುತ್ತವೆ.

ಪರೀಕ್ಷಾ ವೇಳಾಪಟ್ಟಿಯನ್ನು ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು/ಅಧಿಕಾರಿಯವರು ಪ್ರಕಟಿಸುವರು. ಅರ್ಹ ವಿದ್ಯಾರ್ಥಿಗಳು ಪ್ರವೇಶ ಪತ್ರಗಳಿಗೆ ಆಯಾ ಸಂಸ್ಥೆಯ/ಪರೀಕ್ಷಾ ಕೇಂದ್ರಗಳನ್ನು ಸಂಪರ್ಕಿಸಿ ಪ್ರವೇಶ ಪತ್ರಗಳನ್ನು ಪಡೆಯಬಹುದಾಗಿದೆ ಎಂದು ತಾಂತ್ರಿಕ ಪರೀಕ್ಷಾ ಮಂಡಳಿ ಪ್ರಕಟಣೆ ತಿಳಿಸಿದೆ.

## ಕಿರಿಯ ತರಬೇತಿ ಅಧಿಕಾರಿ ಹುದ್ದೆಗಳ ಮೂಲ ದಾಖಲೆಗಳ ಪರಿಶೀಲನಾ ಕಾರ್ಯ

ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯದಲ್ಲಿ ದಿನಾಂಕ 25-09-2019ರಲ್ಲಿ ಅಧಿಸೂಚಿಸಿರುವ ಎಲೆಕ್ಟ್ರಾನಿಕ್ ಮೆಕಾನಿಕ್ 110+23(ಹೈ.ಕ) ಐ ಸಿ ಟಿ ಎ ಎಮ್ 69+08 (ಹೈ.ಕ) ಇನ್ಸುಟ್ರುಮೆಂಟ್ ಮೆಕಾನಿಕ್ 04, ಡ್ರೆಸ್ ಮೇಕಿಂಗ್ 25+06 (ಹೈ.ಕ) ಡ್ರಾಫ್ಟ್ಸ್‌ಮನ್ ಸಿವಿಲ್ 03+01 (ಹೈ.ಕ), ಅರ್ಕಿಟೆಕ್ಚರಲ್ ಅಸಿಸ್ಟೆಂಟ್ 07, ಸೆಕ್ರೆಟರಿಯಲ್ ಪ್ರಾಕ್ಟೀಸ್ 02, ಪಿ ಪಿ ಓ 01 ವೃತ್ತಿಯ ಕಿರಿಯ ತರಬೇತಿ ಅಧಿಕಾರಿಗಳ ಹುದ್ದೆಗಳ ಮೂಲ ದಾಖಲೆಗಳ ಪರಿಶೀಲನಾ ಕಾರ್ಯವನ್ನು 19-11-2019 ರಿಂದ 22-11-2019 ರವರೆಗೆ ನಿಗದಿಪಡಿಸಲಾಗಿದ್ದು, ಅಭ್ಯರ್ಥಿಗಳಿಗೆ ಸೂಚನಾ ಪತ್ರಗಳನ್ನು ಈಗಾಗಲೇ ತ್ವರಿತ ಅಂಚೆ ಮೂಲಕ ರವಾನಿಸಲಾಗಿರುತ್ತದೆ. ದಿನಾಂಕವಾರು ಅಭ್ಯರ್ಥಿಗಳ ಮಾಹಿತಿಗಳ ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದ್ದು, ನಿಗದಿತ ದಿನಾಂಕದಂದು ಆಯೋಗ ಕೇಂದ್ರ ಕಚೇರಿ, ಬೆಂಗಳೂರು ಇಲ್ಲಿ ಹಾಜರಾಗಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಪರಿಷ್ಕೃತ ಅರ್ಹತಾ ಪಟ್ಟಿ ಆಯೋಗದ ವೆಬ್‌ಸೈಟ್‌ನಲ್ಲಿ ಪ್ರಕಟ

ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು 2015 ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ ಗ್ರೂಪ್ – ಎ ಮತ್ತು ಬಿ ವೃಂದದ ಒಟ್ಟು 428 ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಕರ್ನಾಟಕ ನ್ಯಾಯಮಂಡಳಿಯ ಅರ್ಜಿ ಸಂಖ್ಯೆ 4404-4406/2019, 4443/2019, 4463-4469/2019, 4738/2019 ಮತ್ತು 4745/2019 ರಲ್ಲಿನ ದಿನಾಂಕ: 5-11-2019 ರ ಆದೇಶದ ಮೇರೆಗೆ 1:5 ಅನುಪಾತದಲ್ಲಿ ವ್ಯಕ್ತಿತ್ವ ಪರೀಕ್ಷೆಗೆ ಅರ್ಹರಾದ ಅಭ್ಯರ್ಥಿಗಳ ಮರು ಪರಿಷ್ಕೃತ ಅರ್ಹ ಪಟಿಯನ್ನು ಆಯೋಗದ ವೆಬ್‌ಸೈಟ್ **http://kpsc.kar.nic.in/lists/Eligibility** ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ.

## ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ರಾಜ್ಯ ಸರ್ಕಾರದ ದಿನಾಂಕ: 16-11-2016, 15-12-2016 ಹಾಗೂ 13-01-2017 ಗಳ ಅಧಿಸೂಚನೆಯನ್ವಯ 38 ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ 661-ಬೆರಳಚ್ಚುಗಾರರು ಹುದ್ದೆಗಳಿಗೆ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ದಿನಾಂಕ: 13-02-2019 ಆದೇಶದಂತೆ 1983 ರ ಕರ್ನಾಟಕ ನಾಗರೀಕ ಸೇವಾ (ಶೀಘ್ರಲಿಪಿಗಾರರು ಮತ್ತು ಬೆರಳಚ್ಚುಗಾರರು ಹುದ್ದೆಗಳ

ನೇಮಕಾತಿ) ನಿಯಮಗಳ (2015 ರ ತಿದ್ದುಪಡಿ ನಿಯಮ) ಉಪ ನಿಯಮ 2(1) ರಂತೆ ಮರು ಸಿದ್ದಪಡಿಸಲಾದ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ದಿನಾಂಕ: 18–09–2019 ರಂದು ಪ್ರಕಟಿಸಲಾಗಿರುತ್ತದೆ. ಪ್ರಸ್ತುತ ಈ ಹುದ್ದೆಗಳ ಅಂತಿಮ ಆಯ್ಕೆಪಟ್ಟಿಯನ್ನು ಆಯೋಗದ ಅಂತರ್ಜಾಲದಲ್ಲಿ http://kpsc.kar.nic.in/ಪಟ್ಟಿಗಳು/ಅಂತಿಮ ಆಯ್ಕೆಪಟ್ಟಿಯಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

**ಬೆಂಗಳೂರು, ನವೆಂಬರ್ 18 (ಕರ್ನಾಟಕ ವಾರ್ತೆ) :**

ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಜಗದೀಶ್ ಶೆಟ್ಟರ್ ಅವರು ನವೆಂಬರ್ 18 ರಂದು ಬೆಳಗಾವಿ ಮತ್ತು ಧಾರವಾಡ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಅಂದೇ ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗುವರು.